**ಅಸಲು ದಾವಾ ಸಂಖ್ಯೆ-199/2023** **ಪಿ.ಡಬ್ಲ್ಯೂ:- 1**

ದಿನಾಂಕಃ **02-06-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-

ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಇ-ಸ್ವತ್ತಿಗಾಗಿ ಸಂಬಂಧಪಟ್ಟ ಇಲಾಖೆಗೆ ಅರ್ಜಿಯನ್ನು ಸಲ್ಲಿಸಿದ್ದೇನೆ. ಇ-ಸ್ವತ್ತಿಗಾಗಿ ಅರ್ಜಿ ಸಲ್ಲಿಸಿದ ಬಗ್ಗೆ ಹಿಂಬರಹವನ್ನು ಹಾಜರುಪಡಿಸುತ್ತೇನೆ. ಪ್ರತಿವಾದಿಗಳು ದಾವಾ ಆಸ್ತಿಯ ಪೂರ್ವ ದಿಕ್ಕಿಗೆ ರಸ್ತೆಯನ್ನು ಮಾಡಲು ಬಂದಿರುತ್ತಾರೆ. ದಾವಾ ಆಸ್ತಿಯ ಪೂರ್ವಕ್ಕೆ ದನುವಿನ ಮನೆ ಇದೆ. ಸದರಿ ದನುವಿನ ಮನೆ ನನಗೆ ಸೇರಿರುತ್ತದೆ. ದಾವಾ ಆಸ್ತಿಯ ಪೂರ್ವಕ್ಕೆ ಇರುವ ದನುವಿನ ಮನೆಯ ನಂತರ ತಿರುಗಾಡಲು ನಮಗೆ ಸೇರಿದ 10 ಅಡಿ ಜಾಗವನ್ನು ಬಿಟ್ಟುಕೊಂಡಿರುತ್ತೇವೆ. ಸದರಿ 10 ಅಡಿ ಜಾಗದಲ್ಲಿ ಪ್ರತಿವಾದಿಗಳು ರಸ್ತೆಯನ್ನು ಮಾಡಲು ಬಂದಿದ್ದರು. ದಾವಾ ಆಸ್ತಿಯ ದಕ್ಷಿಣಕ್ಕೆ ಮುಖ್ಯ ರಸ್ತೆ ಇರುತ್ತದೆ. ಈ ಹಿಂದೆ ದನುವಿನ ಮನೆ ಸೇರಿ 10 ಅಡಿ ಜಾಗ ಬೀಳು ಇತ್ತು ಆ ಸಮಯದಲ್ಲಿ ಪ್ರತಿವಾದಿಗಳು ಸಹ ತಿರುಗಾಡುತ್ತಿದ್ದರು ಎಂದರೆ ಸರಿ. ದಾವಾ ಆಸ್ತಿಯ ಪೂರ್ವ ಭಾಗಕ್ಕೆ ಪೂರ್ವ-ಪಶ್ಚಿಮವಾಗಿ ಸರ್ಕಾರಕ್ಕೆ ಸೇರಿದ 26 ಅಡಿ ಜಾಗ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 10 ಅಡಿ ಜಾಗ ಇದೆ ಎಂದು ನುಡಿಯುತ್ತಾರೆ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ., ಹೊನ್ನಾಳಿ.**